ಇಲಾಖೆ / ವಿಷಯ: DEPARTMENT / SUBJECT: Election

ಪತ್ರಿಕೆಯ ಹೆಸರು : NAME OF THE NEWS PAPER : Vijaya Vani    ದಿನಾಂಕ : DATE : 2/12/2019

# ಅಂತಿಮ ಘಳಿಗೆ ಚಮತ್ಕಾರಕ್ಕೆ ಕಾಂಗ್ರೆಸ್ ಕಸರತ್ತು

ವಿಜಯವಾಣಿ ಸುದ್ದಿಜಾಲ ಬೆಂಗಳೂರು

ರಾಜ್ಯಸಭೆಯ ಒಂದು ಸ್ಥಾನಕ್ಕೆ ನಡೆಯುವ ಚುನಾವಣೆಗೆ ನಾಮಪತ್ರ ಸಲ್ಲಿಸಲು ಸೋಮವಾರ ಕಡೆಯ ದಿನವಾಗಿದೆ. ಕಾಂಗ್ರೆಸ್-ಜೆಡಿಎಸ್ ಒಮ್ಮತದ ಅಭ್ಯರ್ಥಿ ಕಣಕ್ಕಿಳಿಸಲು ಕೊನೆ ಘಳಿಗೆಯಲ್ಲಿ ಬಿರುಸಿನ ಪ್ರಯತ್ನ ನಡೆದಿದೆ.

ಬಿಜೆಪಿಯಿಂದ ಈಗಾಗಲೇ ಕೆ.ಸಿ.ರಾಮಮೂರ್ತಿ ಕಣದಲ್ಲಿದ್ದಾರೆ. ಕಾಂಗ್ರೆಸ್‌ನಿಂದ ಅಭ್ಯರ್ಥಿ ಹಾಕಬೇಕೋ ಅಥವಾ ಜೆಡಿಎಸ್ ಅಭ್ಯರ್ಥಿಯನ್ನು ಬೆಂಬಲಿಸಬೇಕೋ ಎಂಬುದನ್ನು ಕೈ ನಾಯಕರು ಇನ್ನೂ ತೀರ್ಮಾನಿಸಿಲ್ಲ.

ಮಾಜಿ ಸಂಸದ ವಿ.ಎಸ್.ಉಗ್ರಪ್ಪ, ಪರಿಷತ್ ಮಾಜಿ ಸದಸ್ಯ ಬಿ.ಎಲ್. ಶಂಕರ್ ಅವರನ್ನು ಕಣಕ್ಕಿಳಿಸುವ ಬಗ್ಗೆ ಪಕ್ಷದಲ್ಲಿ ಚರ್ಚೆ ನಡೆದಿದೆ. ಈ ಮಧ್ಯೆ ಎರಡೂ ಪಕ್ಷಕ್ಕೆ ಒಮ್ಮತವಾಗುವಂತ ರಾಜಕೀಯೇತರ ಅಭ್ಯರ್ಥಿಯನ್ನು ಕಣಕ್ಕಿಳಿಸುವ ಆಲೋಚನೆಯೂ ಇದೆ ಎನ್ನಲಾಗಿದೆ. ಜೆಡಿಎಸ್ ವರಿಷ್ಠ ಎಚ್.ಡಿ.ದೇವೇಗೌಡ ಜತೆ ಚರ್ಚಿಸಿ ಅಂತಿಮ ತೀರ್ಮಾನ ಮಾಡಲು ಕೈ ನಾಯಕರು ನಿರ್ಧರಿಸಿದ್ದಾರೆಂದು ಉನ್ನತ ಮೂಲಗಳು ತಿಳಿಸಿವೆ.



» ರಾಜ್ಯಸಭೆ ನಾಮ ಪತ್ರಕ್ಕೆ ಇಂದೇ ಕೊನೇ ದಿನ

ಡಿ.9ಕ್ಕೆ ಉಪ ಚುನಾವಣೆ ಫಲಿತಾಂಶ ಪ್ರಕಟವಾಗಲಿದೆ. ಅಂದು ಶಾಸಕರಾಗಿ ಆಯ್ಕೆಯಾದವರು ಡಿಸೆಂಬರ್ 12ರಂದು ನಡೆಯುವ ರಾಜ್ಯಸಭಾ ಚುನಾವಣೆಯಲ್ಲಿ ಮತದಾನ ಮಾಡಲು ಅರ್ಹರು. ಹೀಗಾಗಿ ಉಪಚುನಾವಣೆ ಫಲಿತಾಂಶ ರಾಜ್ಯಸಭಾ ಚುನಾವಣೆ ಮೇಲೆ ಪರಿಣಾಮ ಬೀರಲಿದೆ.

ಇದೇ ಕಾರಣಕ್ಕೆ ರಾಜ್ಯಸಭೆಗೆ ಕಣಕ್ಕಿಳಿಯಲು ಕಾಂಗ್ರೆಸ್‌ನಲ್ಲಿ ಹಲವರು ಆಸಕ್ತಿ ತೋರಿಸಿಲ್ಲ ಎನ್ನಲಾಗಿದೆ. ರಾಜ್ಯಸಭೆಗೆ ಕಣಕ್ಕಿಳಿಯುವ ಬಗ್ಗೆ ಪ್ರತಿಕ್ರಿಯಿಸಿದ ಕಾಂಗ್ರೆಸ್ ನಾಯಕ ಮಲ್ಲಿಕಾರ್ಜುನ ಖರ್ಗೆ, ಶಾಸಕರ ಅಗತ್ಯ ಸಂಖ್ಯಾಬಲ ನಮ್ಮಲ್ಲಿಲ್ಲ ಎಂದು ಹೇಳಿದರು.

## ಉಪ ಚುನಾವಣೆ ಲೆಕ್ಕಾಚಾರ

ವಿಧಾನಸಭೆ ಸಂಖ್ಯಾಬಲದ ಮೇಲೆ ರಾಜ್ಯಸಭೆಗೆ ಆಯ್ಕೆ ನಡೆಯಲಿದೆ. ಪ್ರಸ್ತುತ ಸ್ಪೀಕರ್ ಸೇರಿ ಬಿಜೆಪಿ 105 ಶಾಸಕರನ್ನು ಹೊಂದಿದೆ. ಒಬ್ಬ ಪಕ್ಷೇತರ ಬಿಜೆಪಿಯನ್ನು ಬೆಂಬಲಿಸಿದ್ದಾರೆ. ಕಾಂಗ್ರೆಸ್ 66, ಜೆಡಿಎಸ್ 34 ಸದಸ್ಯರನ್ನು ಹೊಂದಿದ್ದು, ಬಿಎಸ್ಪಿಯ ಒಬ್ಬ ಶಾಸಕರಿದ್ದಾರೆ. ಆಂಗ್ಲೋ ಇಂಡಿಯನ್ ಪ್ರತಿನಿಧಿ ನಾಮನಿರ್ದೇಶನ ಮತ ಸಹ ಕಾಂಗ್ರೆಸ್ ಪರವಾಗಿದೆ. ಈ ಸಂಖ್ಯಾ ಬಲದ ಆಧಾರದಲ್ಲಿ ಬಿಜೆಪಿ ಅಭ್ಯರ್ಥಿ ಗೆಲ್ಲುವುದು ಸುಲಭ. ಆದರೆ, ಉಪಚುನಾವಣೆ ಫಲಿತಾಂಶ ಪ್ರಕಟವಾದ ಬಳಿಕ ಈ ಬಲಾಬಲ ವ್ಯತ್ಯಾಸವಾಗಲಿದೆ. ಒಂದೊಮ್ಮೆ ರಾಜಕೀಯ ಧ್ರುವೀಕರಣ ನಡೆದು ಉಪಚುನಾವಣೆಯಲ್ಲಿ ಕಾಂಗ್ರೆಸ್-ಜೆಡಿಎಸ್ 11 ಸ್ಥಾನಕ್ಕಿಂತ ಹೆಚ್ಚು ಗೆದ್ದರೆ ರಾಜ್ಯಸಭಾ ಚುನಾವಣೆ ಮೇಲೂ ಪರಿಣಾಮ ಬೀರಲಿದೆ.